## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಸಂಖ್ಯೆ/ಹಿಂವಕಇ/ಡಿಬಿಟಿ-ಇಪಾಸ್/ಸಿಆರ್-12/2013-14

## ಪ್ರಕಟಣೆ

### "ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ

(ಸರ್ಕಾರಿ ಅಥವಾ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆದವರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವವರು, ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.)

***ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.10.2013***

**ಸಾಮಾನ್ಯ ಅರ್ಹತೆ:**

1) ಭಾರತ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಹಾಗೂ ರಾಜ್ಯ ಸರ್ಕಾರವು ಹೊರಡಿಸಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ವಿದ್ಯಾರ್ಥಿಗಳು ಈ ಯೋಜನೆಯಡಿಯಲ್ಲಿ ಸೌಲಭ್ಯ ಪಡೆಯಲು ಅರ್ಹರು.
2) ಕುಟುಂಬದ ವಾರ್ಷಿಕ ವರಮಾನ ರೂ.1.00 ಲಕ್ಷದ ಒಳಗೆ ಇರಬೇಕು. (ಪ್ರವರ್ಗ-1 ರ ವಿದ್ಯಾರ್ಥಿಗಳಿಗೆ ವಾರ್ಷಿಕ ಆದಾಯ ಮಿತಿ ರೂ.2.50 ಲಕ್ಷ).
3) ಹಿಂದಿನ ವಾರ್ಷಿಕ ಪರೀಕ್ಷೆಯಲ್ಲಿ ಕನಿಷ್ಠ ಈ ಕೆಳಗಿನಂತೆ ಶೇಕಡಾವಾರು ಅಂಕಗಳನ್ನು ಪಡೆದಿರಬೇಕು.

ಪ್ರವರ್ಗ-1 - 40 %          ಪ್ರವರ್ಗ-2ಎ, 3ಎ, 3ಬಿ - 50 %

1. **"ವಿದ್ಯಾಸಿರಿ - ಊಟ ಮತ್ತು ವಸತಿ ಸಹಾಯ ಯೋಜನೆ" ಯಡಿ ಆಯ್ಕೆಯಾಗಲು ಅರ್ಹತೆ:**
   1) ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು.
   2) ಗ್ರಾಮೀಣ ಪ್ರದೇಶದವಾಗಿರಬೇಕು. ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ ದೂರದವರಾಗಿರಬೇಕು. (ಆದರೆ ವಿದ್ಯಾರ್ಥಿಯ ಸ್ವಂತ ಸ್ಥಳ ನಗರ/ಪಟ್ಟಣ ಆಗಿದ್ದು, ಬೇರೆ ನಗರ/ಪಟ್ಟಣದಲ್ಲಿನ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ ಅವರೂ ಸಹ ಅರ್ಹರಾಗುತ್ತಾರೆ.)

2. **ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನಕ್ಕೆ ಅರ್ಹತೆ:**
   1) ಸರ್ಕಾರಿ / ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆದಿರಬಾರದು.
   2) ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಸೌಲಭ್ಯ ಪಡೆದಿರಬಾರದು.
   3) **ಗ್ರಾಮೀಣ ಮತ್ತು ಪಟ್ಟಣ ಪ್ರದೇಶದಲ್ಲಿರುವ, ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಲು ಅರ್ಹರು.**

4. **(ಅ) ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ, (ಆ)ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು (ಇ) ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಇವುಗಳಲ್ಲಿ ಒಬ್ಬ ವಿದ್ಯಾರ್ಥಿ, ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರು.**
5. ಅನುದಾನ ಲಭ್ಯತೆಗೆ ಒಳಪಟ್ಟು ಹಿಂದುಳಿದ ವರ್ಗಗಳ ಪ್ರವರ್ಗವಾರು, ಹೆಚ್ಚಿನ ಅರ್ಹತೆ ಇರುವವರನ್ನು, ಮೊದಲಿಗೆ "ಊಟ ಮತ್ತು ವಸತಿ ಸಹಾಯ ಯೋಜನೆ"ಯಡಿ ಆಯ್ಕೆ ಮಾಡಲಾಗುವುದು. ನಂತರದ ಅರ್ಹತೆ (Merit) ಇರುವವರನ್ನು "ವಿದ್ಯಾರ್ಥಿವೇತನ"ಕ್ಕೆ ಪರಿಗಣಿಸಲಾಗುವುದು.
6. ಮಂಜೂರಾದ ಮೊತ್ತವನ್ನು ಅವರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು.
7. ಆನ್‌ಲೈನ್ ಮೂಲಕ ಸಲ್ಲಿಸಬೇಕಾಗುವ ಅರ್ಜಿ ನಮೂನೆಯನ್ನು ದಿನಾಂಕ:01.10.2013ರಂದು karepass.cgg.gov.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.
8. (1) "ಊಟ ಮತ್ತು ವಸತಿ ಸಹಾಯ ಯೋಜನೆ" ಹಾಗೂ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", ಇವುಗಳಿಗೆ **ಒಂದೇ ಅರ್ಜಿಯನ್ನು ಮಾತ್ರ** ಆನ್‌ಲೈನ್ (Online) ಮೂಲಕ ಕಡೆಯ ದಿನಾಂಕದೊಳಗಾಗಿ ಸಲ್ಲಿಸಬೇಕು.

(2) ಯಾವುದಾದರೂ ಸ್ಪಷ್ಟೀಕರಣಕ್ಕಾಗಿ ನೀವು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳನ್ನು ಸಂಪರ್ಕಿಸಬಹುದು. **(ಇವರ ಮಾಹಿತಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯ)**

9. **ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ, ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಈ ಕೆಳಗಿನ ಮೂಲ ದಾಖಲೆಗಳನ್ನು ಪ್ರತ್ಯೇಕವಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿದ್ದು, ಅರ್ಜಿ ಸಲ್ಲಿಸುವಾಗ ಇವುಗಳನ್ನು ಅಪ್‌ಲೋಡ್ ಮಾಡಬೇಕು.**

[ಪ್ರತಿ ದಾಖಲೆಯು **100 Kb JPG Format** ಇರಬೇಕು]

1) ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
2) ಹಿಂದಿನ ವರ್ಷದಲ್ಲಿ ಉತ್ತೀರ್ಣರಾದ ಮೂಲ ಅಂಕಪಟ್ಟಿ.
3) ಕೋರ್ ಬ್ಯಾಂಕಿಂಗ್ ವ್ಯವಸ್ಥೆಯಡಿಯಲ್ಲಿ ಇರುವ ಯಾವುದಾದರೂ ಬ್ಯಾಂಕಿನಲ್ಲಿ, ವಿದ್ಯಾರ್ಥಿಯ ಹೆಸರಿನಲ್ಲಿ ಉಳಿತಾಯ ಖಾತೆಯನ್ನು ತೆರೆದಿರಬೇಕು. (ಹೆಸರು, ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ಇರುವ ರೀತಿಯಲ್ಲಿ ಇರಬೇಕು.) ಪಾಸ್‌ಬುಕ್ ಹೊಂದಿರಬೇಕು. ಬ್ಯಾಂಕ್ ಅಕೌಂಟ್ ನಂಬರು ಮತ್ತು **IFSC** ಕೋಡ್ ಇರುವ ಮೊದಲ ಪುಟದ ಭಾಗದ ಪ್ರತಿ.
4) ಆಧಾರ್ ಸಂಖ್ಯೆಯನ್ನು ಹೊಂದಿರುವುದು ಸೂಕ್ತ. ಇದ್ದಲ್ಲಿ ಅದರ ಪ್ರತಿ ಅಥವಾ ಇ.ಐ.ಡಿ ದಾಖಲೆಯ ಪ್ರತಿ.
5) ಪಡಿತರ ಚೀಟಿ ಇದ್ದಲ್ಲಿ ಅದರ ಪ್ರತಿ.
6) ಯಾವ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಪಡೆಯಲಾಗಿದೆ ಎಂಬ ಬಗ್ಗೆ ದಾಖಲಾತಿ.

**ವಿಶೇಷ ಸೂಚನೆ: 1)** ವಿದ್ಯಾರ್ಥಿಗಳಿಗೆ ತೊಂದರೆ ಆಗದಿರಲು, ಇದುವರೆಗೆ ಮಾಹಿತಿ ಅಪ್‌ಲೋಡ್ ಮಾಡದ ಕಾಲೇಜು ಪ್ರಾಂಶುಪಾಲರು, ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಆಯಾ ಕಾಲೇಜಿನ ಹಾಗೂ ಕೋರ್ಸುಗಳ ಮಾಹಿತಿಯನ್ನು ಕೂಡಲೇ ಅಪ್‌ಲೋಡ್ ಮಾಡಲು ಸೂಚಿಸಿದೆ.

2) 2006ಕ್ಕಿಂತ ಹಿಂದೆ ಎಸ್.ಎಸ್.ಎಲ್.ಸಿ ಪಾಸಾದ ಕಾಲೇಜು ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ಮುಂಚೆ ಸಂಬಂಧಿಸಿದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳನ್ನು ಎಸ್.ಎಸ್.ಎಲ್.ಸಿ ಅಂಕಪಟ್ಟಿಯೊಂದಿಗೆ ಭೇಟಿ ಮಾಡಿ, ಅಗತ್ಯ ನಮೂದುಗಳನ್ನು ಇಲಾಖೆಯ ಇ-ಪಾಸ್ ವೆಬ್‌ಪೋರ್ಟಲ್‌ನಲ್ಲಿ ದಾಖಲಿಸುವಂತೆ ಕೋರುವುದು. ತದನಂತರ, ಆನ್‌ಲೈನ್ ಅರ್ಜಿಯನ್ನು ಸಲ್ಲಿಸಬಹುದು.

3) "ಊಟ ಮತ್ತು ವಸತಿ ಸಹಾಯ ಯೋಜನೆ" ಹಾಗೂ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ" ಕಾರ್ಯಕ್ರಮಗಳ ಸರ್ಕಾರದ ಆದೇಶಗಳು ಇಲಾಖೆಯ ವೆಬ್‌ಸೈಟ್ www.backwardclasses.kar.nic.in ಇಲ್ಲಿ ಲಭ್ಯ.

**ದಿನಾಂಕ: 01.10.2013**

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.